# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಸರ್ವಜ್ಞನಗರ ವಿಧಾನ ಸಭಾಕ್ಷೇತ್ರದ ವ್ಯಾಪ್ತಿಗೆ ಒಳಪಡುವ ವಾರ್ಡ್ ಸಂಖ್ಯೆ.30/96 ಕೆ.ಜಿ.ಹಳ್ಳಿಗೆ ಸಂಬಂಧಿಸಿದಂತೆ ದಿನಾಂಕ: 17.12.2022 ರಂದು ಶ್ರೀಮತಿ.ವೇದಾವತಿ ನೋಡಲ್ ಅಧಿಕಾರಿಗಳು ಇವರ ಅಧ್ಯಕ್ಷತೆಯಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡಾವಳಿಗಳು.**

ಸಭೆಯಲ್ಲಿ ಹಾಜರಿದ್ದವರ ವಿವರ:-

| ಕ್ರಮ ಸಂಖ್ಯೆ | ಅಧಿಕಾರಿಗಳ ಹೆಸರು | ಪದನಾಮ |
|---|---|---|
| 1 | ಶ್ರೀಮತಿ.ವೇದಾವತಿ | ನೋಡಲ್ ಅಧಿಕಾರಿಗಳು ಮತ್ತು ವಾರ್ಡ್ ಸಮಿತಿ ಅಧ್ಯಕ್ಷರು ವಾರ್ಡ್ ಸಂಖ್ಯೆ.30/96 ಕೆ.ಜಿ.ಹಳ್ಳಿ |
| 2 | ಶ್ರೀ.ನಾಗರಾಜ್ | ಸಹಾಯಕ ಅಭಿಯಂತರರು, & ಸದಸ್ಯ ಕಾರ್ಯದರ್ಶಿಗಳು ವಾರ್ಡ್ ಸಮಿತಿ ವಾರ್ಡ್ ಸಂಖ್ಯೆ.30/96. ಕೆ.ಜಿ.ಹಳ್ಳಿ |
| 3 | ಶ್ರೀ.ಹರ್ಷಿತ್ ಕುಮಾರ್ | ಸಹಾಯಕ ಅಭಿಯಂತರರು ವಾರ್ಡ್ ಸಂಖ್ಯೆ.30/96 ಕೆ.ಜಿ.ಹಳ್ಳಿ |
| 4 | ಕುಮಾರಿ ಮೋನಿಕಾ | ಕಿರಿಯ ಆರೋಗ್ಯ ಪರಿವೀಕ್ಷಕರು ವಾರ್ಡ್ ಸಂಖ್ಯೆ.30/96 |
| 5 | ಶ್ರೀ.ಶಂಕರ್ | ಬೆಸ್ಕಾಂ ಉಪ-ವಿಭಾಗ, ಲೈನ್‌ಮೆನ್ |
| 6 | ಶ್ರೀ.ಮಂಜುನಾಥ್ | ಕೆಲಸ ಪರಿವೀಕ್ಷಕರು ಬಿ.ಡಬ್ಲ್ಯೂ.ಎಸ್.ಎಸ್.ಬಿ |
| 7 | ಶ್ರೀ.ಬಿ.ಎಂ.ವೆಂಕಟೇಶ್ | ಎ.ಎಸ್.ಐ ಕೆ.ಜಿ.ಹಳ್ಳಿ ಪೋಲೀಸ್ ಠಾಣೆ |
| 8 | ಶ್ರೀ.ಪಿ.ಚಂದ್ರಶೇಖರ್ | ಹೆಚ್.ಆರ್.ಪಿ.ಜಿ |
| 9 | ಶ್ರೀ.ಮೊಹಮ್ಮದ್ ಮಜಹುದ್ದೀನ್ | ಹೆಚ್.ಆರ್.ಪಿ.ಜಿ |
| 10 | ಶ್ರೀ.ಇಫ್ರಾನ್ | ಸ್ಥಳೀಯರು |
| 11 | ಶ್ರೀ.ಫಹೀಮ್ ಖಾನ್ | ಸ್ಥಳೀಯರು |
| 12 | ಶ್ರೀ.ರಮೇಶ್ | ಸ್ಥಳೀಯರು |
| 13 | ಶ್ರೀ.ಎರ್ರನ್ ಕುಮಾರ್ | ಸ್ಥಳೀಯರು |

ವಾರ್ಡ್ ಸಮಿತಿಯ ನೋಡಲ್ ಅಧಿಕಾರಿ ರವರು ಮತ್ತು ಸದಸ್ಯ ಕಾರ್ಯದರ್ಶಿ ರವರು ಸಭೆಯಲ್ಲಿ ಹಾಜರಿದ್ದ ಅಧಿಕಾರಿಗಳನ್ನು ಹಾಗೂ ಸಾರ್ವಜನಿಕರನ್ನು ಸ್ವಾಗತಿಸುವುದರೊಂದಿಗೆ ಸಭೆಯನ್ನು ಪ್ರಾರಂಭಿಸಲಾಯಿತು.

**1) ಆರೋಗ್ಯ ವೈಧ್ಯಾಧಿಕಾರಿಗಳು:-** ವಾರ್ಡ್‌ನ ವ್ಯಾಪ್ತಿಯಲ್ಲಿ ಡೇಂಗ್ಯೂ ಜ್ವರದ ಬಗ್ಗೆ ಸಾರ್ವಜನಿಕರಿಗೆ ಅರಿವು ಮೂಡಿಸಬೇಕೆಂದು ಸಭೆಯಲ್ಲಿ ಹಾಜರಿದ್ದ ವೈಧ್ಯಾಧಿಕಾರಿಗಳಿಗೆ ನೋಡಲ್ ಅಧಿಕಾರಿಗಳು ರವರು ಸಭೆಯಲ್ಲಿ ತಿಳಿಸಿದರು ಹಾಗೂ ವಾರ್ಡ್ ವ್ಯಾಪ್ತಿಯಲ್ಲಿನ ಪಾರ್ಕ್‌ಗಳಲ್ಲಿ ಸೊಳ್ಳೆಗಳ ಹಾವಳಿ ಹೆಚ್ಚಾಗಿದ್ದು, ಸೊಳ್ಳೆಗಳ ನಿಯಂತ್ರಣಕ್ಕಾಗಿ ಫಾಗಿಂಗ್ ಅನ್ನು ಸಿಂಪಡಿಸಬೇಕೆಂದು ಸಭೆಯಲ್ಲಿ ತಿಳಿಸಿದರು.

ಸದರಿ ವಿಷಯದ ಬಗ್ಗೆ ಆರೋಗ್ಯ ವೈದ್ಯಾಧಿಕಾರಿಗಳಿಗೆ ಕ್ರಮ ಕೈಗೊಳ್ಳುವಂತೆ ವಾರ್ಡ್‌ನ ನೋಡಲ್ ಅಧಿಕಾರಿ ರವರು ಸೂಚಿಸಿರುತ್ತಾರೆ.

**(ಕ್ರಮ:- ಆರೋಗ್ಯ ವೈಧ್ಯಾಧಿಕಾರಿಗಳು ಸರ್ವಜ್ಞನಗರ ವಿಭಾಗ ಬಿ.ಬಿ.ಎಂ.ಪಿ)**

**2) ನೀರು ಸರಭರಾಜು ಮತ್ತು ಒಳಚರಂಡಿ ವ್ಯವಸ್ಥೆ (ಬಿ.ಡಬ್ಲ್ಯೂ.ಎಸ್.ಎಸ್.ಬಿ):-** ವಾರ್ಡ್ ಕೆ.ಜಿ.ಹಳ್ಳಿ ವ್ಯಾಪ್ತಿಯಲ್ಲಿನ ವಿನೋಭನಗರ ಇಲ್ಲಿ ಸಮಯಕ್ಕೆ ಸರಿಯಾಗಿ ನೀರು ಸರಬರಾಜು ಆಗುತ್ತಿಲ್ಲವೆಂದು ಸಭೆಯಲ್ಲಿ ತಿಳಿಸಿದರು ಹಾಗೂ ವಾಲ್‌ಮೆನ್‌ಗಳು ಸಮಯಕ್ಕೆ ಸರಿಯಾಗಿ ನೀರು ಬಿಡುತ್ತಿಲ್ಲವೆಂದು ತಿಳಿಸಿದರು.

ಈ ಬಗ್ಗೆ ಸ್ಥಳ ಪರಿಶೀಲಿಸಿ ಕ್ರಮ ಕೈಗೊಳ್ಳಲು ಸಭೆಯಲ್ಲಿ ಹಾಜರಿದ್ದ ಶ್ರೀ.ಮಂಜುನಾಥ್, ಕೆಲಸ ಪರಿವೀಕ್ಷಕರು, ಬಿ.ಡಬ್ಲ್ಯೂ.ಎಸ್.ಎಸ್.ಬಿ ರವರಿಗೆ ಕ್ರಮ ಕೈಗೊಂಡು ಮುಂದಿನ ಸಭೆಯಲ್ಲಿ ಮಾಹಿತಿ ಸಲ್ಲಿಸಬೇಕೆಂದು ವಾರ್ಡ್‌ನ ನೋಡಲ್ ಅಧಿಕಾರಿ ರವರು ಸೂಚಿಸಿರುತ್ತಾರೆ.

**(ಕ್ರಮ :- ಸ.ಕಾ.ಅ.ಬಿ.ಡಬ್ಲ್ಯು.ಎಸ್.ಎಸ್.ಬಿ ಉಪ-ವಿಭಾಗ, ಫ್ರೆಜರ್‌ಟೌನ್)**

**3) ಘನತ್ಯಾಜ್ಯ ನಿರ್ವಹಣೆ:-** ವಾರ್ಡ್ ವ್ಯಾಪ್ತಿಯಲ್ಲಿ ಘನತ್ಯಾಜ್ಯ ನಿರ್ವಹಣೆಯನ್ನು ಸರಿಯಾಗಿ ನಿರ್ವಹಿಸುತ್ತಿಲ್ಲವೆಂದು ಮತ್ತು ರಸ್ತೆಗಳನ್ನು ಸರಿಯಾಗಿ ಸ್ವಚ್ಛಗೊಳಿಸುತ್ತಿಲ್ಲವೆಂದು ಹಾಗೂ ಘನತ್ಯಾಜ್ಯ ಪಾಯಿಂಟ್‌ಗಳ ಹತ್ತಿರ ಆಟೋಗಳಲ್ಲಿ ಮತ್ತು ವಾಹನಗಳಲ್ಲಿ ಅಪರಿಚಿತರು ಕಸದ ರಾಶಿಯನ್ನು ಸುರಿಯುತ್ತಿದ್ದಾರೆಂದು ಸಾರ್ವಜನಿಕರು ಸಭೆಯಲ್ಲಿ ತಿಳಿಸಿರುತ್ತಾರೆ. ಸದರಿ ವಿಷಯದ ಬಗ್ಗೆ ಸಭೆಯಲ್ಲಿ ಹಾಜರಿದ್ದ ಕಿರಿಯ ಆರೋಗ್ಯ ಪರಿವೀಕ್ಷಕರು ಸದರಿ ವಿಷಯದ ಬಗ್ಗೆ ಕ್ರಮ ಕೈಗೊಳ್ಳುತ್ತಿರುವುದಾಗಿ ಸಭೆಯಲ್ಲಿ ತಿಳಿಸಿರುತ್ತಾರೆ.

**(ಕ್ರಮ :-ಸಹಾಯಕ ಕಾರ್ಯಪಾಲಕ ಅಭಿಯಂತರರು ಘನತ್ಯಾಜ್ಯ ನಿರ್ವಹಣೆ ಸರ್ವಜ್ಞನಗರ ವಿಭಾಗ ಬೆಂಗಳೂರು)**

**4) ಕಾಮಗಾರಿ ಇಲಾಖೆ:-** ಕೆ.ಜಿ.ಹಳ್ಳಿ ವಾರ್ಡ್ ವ್ಯಾಪ್ತಿಯಲ್ಲಿನ ವಿನೋಭನಗರ ಕ್ವಾಟ್ರರ್ಸ್‌ನಲ್ಲಿ ಅಳವಡಿಸಲಾಗಿರುವ ಸಿ.ಸಿ.ಟಿ.ವಿ.ಗಳು ಹಾಗೂ ಇನ್ನಿತರೆ ಕಡೆಗಳಲ್ಲಿ ಸಿ.ಸಿ.ಟಿ.ವಿ.ಗಳು ಕಾರ್ಯನಿರ್ವಹಿಸುತ್ತಿಲ್ಲವೆಂದು ಹಿಂದಿನ ಸಭೆಯಲ್ಲಿ ತಿಳಿಸಿದ್ದು, ಸದರಿ ವಿಷಯಕ್ಕೆ ಸಂಬಂಧಿಸಿದಂತೆ 2022-23ನೇ ಸಾಲಿನ ಪಿ.ಓ.ಡಬ್ಲ್ಯೂ ಯೋಜನೆಯಡಿಯಲ್ಲಿ ಕಾಮಗಾರಿಯನ್ನು ಕೈಗೊಳ್ಳುವುದಾಗಿ ಸಹಾಯಕ ಅಭಿಯಂತರರು ಸಭೆಯಲ್ಲಿ ತಿಳಿಸಿದರು.

ಸದರಿ ವಿಷಯದ ಬಗ್ಗೆ ಕ್ರಮ ಕೈಗೊಳ್ಳಲು ವಾರ್ಡ್‌ನ ನೋಡಲ್ ಅಧಿಕಾರಿ ರವರು ಸೂಚಿಸಿರುತ್ತಾರೆ.

**(ಕ್ರಮ:- ಸಹಾಯಕ ಕಾರ್ಯಪಾಲಕ ಅಭಿಯಂತರರು ಹೆಚ್.ಬಿ.ಆರ್ ಲೇಔಟ್ ಉಪ- ವಿಭಾಗ ಬಿ.ಬಿ.ಎಂ.ಪಿ)**

**5) ಬೆಸ್ಕಾಂ ವಿಭಾಗ:-** ಕೆ.ಜಿ.ಹಳ್ಳಿ ವಾರ್ಡ್ ವ್ಯಾಪ್ತಿಯ ವಿನೋಭನಗರದ ಕಾರ್ಪೋರೇಟರ್ ಕಛೇರಿಯ ಪಕ್ಕದಲ್ಲಿ ಅಳವಡಿಸಲಾಗಿರುವ ಟ್ರಾನ್ಸ್‌ಫಾರ್ಮರ್ ಅನ್ನು ಬೇರೆ ಕಡೆಗೆ ಸ್ಥಳಾಂತರಿಸಲು ಸಭೆಯಲ್ಲಿ ತಿಳಿಸಿರುತ್ತಾರೆ.

ಸದರಿ ವಿಷಯದ ಬಗ್ಗೆ ಸ್ಥಳ ಪರಿಶೀಲಿಸಿ ಕ್ರಮ ಕೈಗೊಳ್ಳಲು ಬೆಸ್ಕಾಂ ವಿಭಾಗದವರಿಗೆ ವಾರ್ಡ್‌ನ ನೋಡಲ್ ಅಧಿಕಾರಿ ರವರು ಸೂಚಿಸಿರುತ್ತಾರೆ.

**(ಕ್ರಮ:- ಸಹಾಯಕ ಕಾರ್ಯಪಾಲಕ ಅಭಿಯಂತರರು ಬೆಸ್ಕಾಂ ವಿಭಾಗ)**

6) <u>ಕಾನೂನು ಸುವ್ಯವಸ್ಥೆ (ಪೋಲೀಸ್ ಇಲಾಖೆ)-</u> ಕೆ.ಜಿ.ಹಳ್ಳಿ ವಾರ್ಡ್ ವ್ಯಾಪ್ತಿಯಲ್ಲಿ ಕೆಲವು ಕಿಡಿಗೇಡಿಗಳು ಕಾನೂನು ಬಾಹಿರ ಚಟುವಟಿಕೆಯನ್ನು ನಡೆಸುತ್ತಿದ್ದಾರೆಂದು ಸಭೆಯಲ್ಲಿ ತಿಳಿಸಿರುತ್ತಾರೆ.

**<u>(ಕ್ರಮ: ಆರಕ್ಷಕ ವೃತ್ತ ನಿರೀಕ್ಷಕರು ಕೆ.ಜಿ.ಹಳ್ಳಿ ಪೋಲೀಸ್ ಠಾಣೆ)</u>**

ಮುಂದುವರೆದು ದಿನಾಂಕ: 17.12.2022 ರಂದು ವಾರ್ಡ್ ಸಮಿತಿ ಸಭೆಗೆ ಗೈರು ಹಾಜರಾಗಿರುವ ಅಧಿಕಾರಿಗಳನ್ನು ಮುಂದಿನ ವಾರ್ಡ್ ಸಮಿತಿ ಸಭೆಗೆ ತಪ್ಪದೇ ಹಾಜರಾಗಲು ತಿಳಿಸಲಾಗಿದೆ. ತಪ್ಪಿದ್ದಲ್ಲಿ ಮೇಲಾಧಿಕಾರಿಗಳಿಗೆ ವರದಿ ಮಾಡಲು ವಾರ್ಡ್‌ನ ನೋಡಲ್ ಅಧಿಕಾರಿ ರವರು ಸೂಚಿಸಿರುತ್ತಾರೆ.

ಸಭೆಯಲ್ಲಿ ಹಾಜರಿದ್ದ ಎಲ್ಲರನ್ನು ವಂದಿಸಿ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

**ವಂದನೆಗಳೊಂದಿಗೆ,**

**ಶ್ರೀ.ನಾಗರಾಜು**
ಸಹಾಯಕ ಅಭಿಯಂತರರು ಹಾಗೂ
ಸದಸ್ಯ ಕಾರ್ಯದರ್ಶಿಗಳು
ವಾರ್ಡ್ ಸಂಖ್ಯೆ.30/96

**ಡಾ||ವೇದಾವತಿ**
ನೋಡಲ್ ಅಧಿಕಾರಿ & ವಾರ್ಡ್ ಸಮಿತಿ ಅಧ್ಯಕ್ಷರು
ವಾರ್ಡ್ ಸಂಖ್ಯೆ.30/96 ಕೆ.ಜಿ.ಹಳ್ಳಿ

**<u>ಪ್ರತಿಯನ್ನು:</u>**

1. ಮಾನ್ಯ ಶಾಸಕರು, ಸರ್ವಜ್ಞನಗರ ವಿಧಾನ ಸಭಾಕ್ಷೇತ್ರ ರವರ ಅವಗಾಹನೆಗಾಗಿ ಸಲ್ಲಿಸಿದೆ.
2. ಮಾನ್ಯ ವಿಶೇಷ ಆಯುಕ್ತರು (ಪೂರ್ವ) ವಲಯ ಬಿ.ಬಿ.ಎಂ.ಪಿ ರವರ ಅವಗಾಹನೆಗಾಗಿ ಸಲ್ಲಿಸಿದೆ.
3. ಕೌನ್ಸಿಲ್ ಕಾರ್ಯದರ್ಶಿಗಳು ಬಿ.ಬಿ.ಎಂ.ಪಿ ಕೇಂದ್ರ ಕಛೇರಿ ರವರ ಅವಗಾಹನೆಗೆ ಸಲ್ಲಿಸಿದೆ.
4. ಜಂಟಿ ಆಯುಕ್ತರು (ಪೂರ್ವ) ರವರ ಅವಗಾಹನೆಗಾಗಿ ಸಲ್ಲಿಸಿದೆ.
5. ಮುಖ್ಯ ಅಭಿಯಂತರರು (ಪೂರ್ವ) ರವರ ಅವಗಾಹನೆಗಾಗಿ ಸಲ್ಲಿಸಿದೆ.
6. ಕಾರ್ಯಪಾಲಕ ಅಭಿಯಂತರರು ಸರ್ವಜ್ಞನಗರ ವಿಭಾಗ ರವರ ಅವಗಾಹನೆಗೆ ಕಳುಹಿಸಿದೆ.
7. ಸಹಾಯಕ ಕಾರ್ಯಪಾಲಕ ಅಭಿಯಂತರರು ಬೆಸ್ಕಾಂ ಉಪ-ವಿಭಾಗ ಪಿಳ್ಳಣ್ಣಗಾರ್ಡನ್ ಕೆ.ಜಿ.ಹಳ್ಳಿ ಬೆಂಗಳೂರು ರವರ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ ಕಳುಹಿಸಿದೆ.
8. ಸಹಾಯಕ ಕಾರ್ಯಪಾಲಕ ಅಭಿಯಂತರರು ಬಿ.ಡಬ್ಲ್ಯೂ.ಎಸ್.ಎಸ್.ಬಿ ಫ್ರೇಜರ್‌ಟೌನ್ ಉಪ-ವಿಭಾಗ ಬೆಂಗಳೂರು ರವರ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ ಕಳುಹಿಸಿದೆ.
9. ಸಹಾಯಕ ಕಾರ್ಯಪಾಲಕ ಅಭಿಯಂತರರು ಘನತ್ಯಾಜ್ಯ ನಿರ್ವಹಣೆ ಸರ್ವಜ್ಞನಗರ ವಿಭಾಗರವರ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ ಕಳುಹಿಸಿದೆ.
10. ಸಹಾಯಕ ಕಾರ್ಯಪಾಲಕ ಅಭಿಯಂತರರು ಹೆಚ್.ಬಿ.ಆರ್ ಲೇಔಟ್ ಉಪ- ವಿಭಾಗ ಬಿ.ಬಿ.ಎಂ.ಪಿ ಬೆಂಗಳೂರು ರವರ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ ಕಳುಹಿಸಿದೆ.
11. ಆರಕ್ಷಕ ವೃತ್ತ ನಿರೀಕ್ಷಕರು (ಕಾನೂನು ಮತ್ತು ಸುವ್ಯವಸ್ಥೆ) ಕೆ.ಜಿ.ಹಳ್ಳಿ ಪೋಲೀಸ್‌ಠಾಣೆರವರ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ ಕಳುಹಿಸಿದೆ.
12. ಆರೋಗ್ಯ ವೈದ್ಯಾಧಿಕಾರಿಗಳು ಸರ್ವಜ್ಞನಗರ ವಿಭಾಗ ಬಿ.ಬಿ.ಎಂ.ಪಿ ರವರ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ ಕಳುಹಿಸಿದೆ.
13. ಕಛೇರಿ ಕಡತಕ್ಕೆ.